ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016–17 ದಿನಾಂಕ: 13–06–2016

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ತಿಂಗಳ ಚಿತ್ರ : ಯುವ ಕಲಾವಿದರ ಕೃತಿಗಳ ಪ್ರದರ್ಶನ:<br><br>ಉದ್ಘಾಟನೆ:<br><br>ಬಲವಂತರಾವ್ ಪಾಟೀಲ್<br>ಜಂಟಿ ನಿರ್ದೇಶಕರು<br>ಕನ್ನಡ ಮತ್ತು ಸಂಸ್ಕೃತಿ ಇಲಾಖೆ<br><br>ಅಧ್ಯಕ್ಷತೆ:<br><br>ಡಾ: ಎಂ.ಎಸ್. ಮೂರ್ತಿ,<br>ಅಧ್ಯಕ್ಷರು, ಕರ್ನಾಟಕ ಲಲಿತಕಲಾ ಅಕಾಡೆಮಿ | 14–06–2016<br>ಮಂಗಳವಾರ<br>ಬೆಳಿಗ್ಗೆ<br>11–00 ಗಂಟೆಗೆ | ಕರ್ನಾಟಕ ಲಲಿತಕಲಾ ಅಕಾಡೆಮಿ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು |

ನಿರ್ದೇಶಕರ ಪರವಾಗಿ

**ಪತ್ರಿಕಾ ಪ್ರಕಟಣೆ**

# ಹೈನುಗಾರಿಕೆ, ಮೇವು ಉತ್ಪಾದನೆ ತರಬೇತಿ

**ಬೆಂಗಳೂರು, ಜೂನ್ 13 (ಕರ್ನಾಟಕ ವಾರ್ತೆ)**

ರಾಜ್ಯ ಜಾನುವಾರು ಸಂವರ್ಧನಾ ಮತ್ತು ತರಬೇತಿ ಕೇಂದ್ರ (ಇಂಡೋ–ಡ್ಯಾನಿಷ್ ಫಾರಂ), ಹೆಸರಘಟ್ಟ, ಬೆಂಗಳೂರು – 560 008 ಇಲ್ಲಿ ದಿನಾಂಕ 20–06–2016 ರಿಂದ 25–06–2016 ರ ವರೆಗೆ ಬೆಳಿಗ್ಗೆ 10–00 ರಿಂದ ಸಾಯಂಕಾಲ 04–30 ರವರೆಗೆ ಹೈನುಗಾರಿಕೆ ಪ್ರಾರಂಭಿಸಲು ಆಸಕ್ತಿಯುಳ್ಳ ರೈತರಿಗೆ, ರೈತ ಮಕ್ಕಳಿಗೆ ಹಾಗೂ ರೈತ ಮಹಿಳೆಯರಿಗೆ 6 ದಿನಗಳ "ಹೈನುಗಾರಿಕೆ ಹಾಗೂ ಮೇವು ಉತ್ಪಾದನೆ" ಬಗ್ಗೆ ತರಬೇತಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಈ ತರಬೇತಿ ಅವಧಿಯಲ್ಲಿ ಊಟ ಮತ್ತು ಪ್ರಯಾಣದ ವೆಚ್ಚವನ್ನು ಅಭ್ಯರ್ಥಿಗಳೇ ಭರಿಸತಕ್ಕದ್ದು. ತರಬೇತಿ ಅವಧಿಯಲ್ಲಿ ವಿದ್ಯಾರ್ಥಿ ನಿಲಯದಲ್ಲಿ ಉಳಿದುಕೊಳ್ಳಲು ಇಚ್ಛಿಸಿದರೆ ಒಂದು ದಿನಕ್ಕೆ

ರೂ 25-00 ರಂತೆ ವಸತಿ ಶುಲ್ಕ ಪಾವತಿಸಬೇಕಾಗಿರುತ್ತದೆ. ತರಬೇತಿ ಪಡೆಯಲು ಇಚ್ಛಿಸುವವರು ವಾಸಸ್ಥಳದ ಯಾವುದಾದರೊಂದು ದೃಢೀಕರಣದ ಪ್ರತಿ ಹಾಗೂ ಇತ್ತೀಚಿನ 2 ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳೊಂದಿಗೆ 20-06-2016 ರಂದು ಬೆಳಿಗ್ಗೆ 9-30 ಗಂಟೆಗೆ ನೇರವಾಗಿ ತರಬೇತಿಗೆ ಹಾಜರಾಗಬಹುದು.

ಹೆಚ್ಚಿನ ಮಾಹಿತಿಗಾಗಿ ಕಚೇರಿ ವೇಳೆಯಲ್ಲಿ ಉಪ ನಿರ್ದೇಶಕರು (ತರಬೇತಿ), ಇವರನ್ನು ನೇರವಾಗಿ ಅಥವಾ ದೂರವಾಣಿ ಮುಖೇನ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ. ಕಚೇರಿ ದೂರವಾಣಿ ಸಂಖ್ಯೆ 080 – 28466397.

**ಬಾಬು::ಜಿಪಿಆರ್**

# ರಾಜ್ಯದಲ್ಲಿ "ಆಹಾರ ಆಯೋಗ" ರಚನೆ

**ಬೆಂಗಳೂರು, ಜೂನ್ 13 (ಕರ್ನಾಟಕ ವಾರ್ತೆ)**

ರಾಷ್ಟ್ರೀಯ ಆಹಾರ ಭದ್ರತೆ ಕಾಯ್ದೆ ಅನ್ವಯ ರಾಜ್ಯದಲ್ಲಿ "ಆಹಾರ ಆಯೋಗ' ರಚಿಸಲು ಸರ್ಕಾರ ಮುಂದಾಗಿದೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ದಿನೇಶ್ ಗುಂಡೂರಾವ್ ಅವರು ತಿಳಿಸಿದರು.

ವಿಧಾನಸೌಧದ ತಮ್ಮ ಕಚೇರಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು ಸದ್ಯದಲ್ಲೇ ಆಯೋಗದ ಅಧ್ಯಕ್ಷರನ್ನು ಆಯ್ಕೆ ಮಾಡಲಾಗುವುದು. ಆಯ್ಕೆ ಸಮಿತಿಯಲ್ಲಿ ಮುಖ್ಯಮಂತ್ರಿ ಅವರು ಸೇರಿದಂತೆ ಉಭಯ ಸದನಗಳ ಸಭಾಧ್ಯಕ್ಷರು, ಸಭಾಪತಿಗಳು, ವಿರೋಧ ಪಕ್ಷಗಳ ನಾಯಕರು ಸೇರಿದಂತೆ ಆಹಾರ ಸಚಿವರು ಸಮಿತಿಯಲ್ಲಿರುತ್ತಾರೆ ಎಂದರು.

ಆಹಾರ ಆಯೋಗ ರಚನೆಯಾಗುವವರೆಗೂ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ವೇದಿಕೆಯೇ ಆಯೋಗ ನಿರ್ವಹಿಸುವ ಕೆಲಸವನ್ನು ತಾತ್ಕಾಲಿಕವಾಗಿ ನಿರ್ವಹಿಸಲಿದೆ ಎಂದ ದಿನೇಶ್ ಗುಂಡೂರಾವ್ ಅವರು ದೇಶದಲ್ಲೇ ಈ ಆಯೋಗ ರಚಿಸುತ್ತಿರುವ ಮೂರನೇ ರಾಜ್ಯ ಕರ್ನಾಟಕವಾಗಲಿದೆ. ಈಗಾಗಲೇ ಬಿಹಾರ ಮತ್ತು ಹರಿಯಾಣ ರಾಜ್ಯಗಳಲ್ಲಿ ಆಯೋಗ ರಚನೆಯಾಗಿ ಕರ್ತವ್ಯ ನಿರ್ವಹಿಸುತ್ತಿವೆ ಎಂದರು.

ರಾಜ್ಯದಲ್ಲಿ ಪಡಿತರ ಆಹಾರ ಧಾನ್ಯಗಳ ಅಕ್ರಮ ಸಾಗಾಣಿಕೆ ಹಾಗೂ ದುರ್ಬಳಕೆಯಾಗುತ್ತಿರುವುದನ್ನು ಪತ್ತೆಮಾಡಿ ಮಾಹಿತಿ ನೀಡುವ ಮಾಹಿತಿದಾರರಿಗೆ ಬಹುಮಾನ ನೀಡುವ ಯೋಜನೆಯನ್ನು ತಕ್ಷಣದಿಂದ ಜಾರಿಗೆ ತರಲಾಗುವುದು ಎಂದ ಆಹಾರ ಸಚಿವರು ಪಡಿತರ ಅಕ್ರಮ ಸಾಗಾಣಿಕ ಬಗ್ಗೆ ಮಾಹಿತಿ ನೀಡುವವರಿಗೆ ಸಾಗಾಣಿಕೆ ಮಾಡುತ್ತಿರುವ ಪಡಿತರ ಮೌಲ್ಯದ ಶೇ 5 ರಷ್ಟು ಹಣವನ್ನು ಬಹುಮಾನವಾಗಿ ನೀಡಲಾಗುವುದು. ಅಲ್ಲದೆ ಮಾಹಿತಿ ನೀಡುವ ಮಾಹಿತಿದಾರರ ಗುರುತನ್ನು ಗೌಪ್ಯವಾಗಿ ಇಡಲಾಗುವುದು. ಇದು ದೇಶದಲ್ಲೇ ಮೊದಲ ಕಾರ್ಯಕ್ರಮವಾಗಿದೆ ಎಂದರು.

ಮುಂದಿನ ತಿಂಗಳಿಂದ ಆನ್‌ಲೈನ್ ಮೂಲಕವೇ ಎಪಿಎಲ್ ಕಾರ್ಡುಗಳನ್ನು ಪಡೆಯುವ ಯೋಜನೆ ಜಾರಿಗೆ ಬರಲಿದ್ದು, ಫಲಾನುಭವಿಗಳು ತಮ್ಮ ಆಧಾರ್ ಕಾರ್ಡ್ ನಂಬರನ್ನು ನಮೂದಿಸಿ ವಿಳಂಬವಿಲ್ಲದೆ ತಕ್ಷಣದಲ್ಲೇ ಆನ್‌ಲೈನ್ ಮೂಲಕವೇ ಎಪಿಎಲ್ ಕಾರ್ಡುಗಳನ್ನು ಪಡೆಯಬಹುದು ಎಂದು ಮಾತನಾಡಿದ ಸಚಿವರು ನವೆಂಬರ್ ತಿಂಗಳಿಂದ ಸರ್ಕಾರ ವಿತರಿಸುವ ಪಡಿತರ ತಾಳೆಎಣ್ಣೆಯಲ್ಲಿ ವಿಟಮಿನ್ ಎ ಮತ್ತು ಡಿ ಗಳನ್ನು ಸೇರಿಸಿ ವಿತರಿಸಲಗುವುದು. ಅಲ್ಲದೆ, ಪಡಿತರ ಕಾರ್ಡಿಗೆ ಆಧಾರ್

ಲಿಂಕ್ ಮಾಡುವ ಕಡೆಯ ದಿನವನ್ನು ಜೂನ್ 30 ರವರೆಗೆ ವಿಸ್ತರಿಸಲಾಗಿದೆ ಎಂದು ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ ಸಚಿವರಾದ ದಿನೇಶ್‌ಗುಂಡೂರಾವ್ ಅವರು ತಿಳಿಸಿದರು.

ಬಾಬು::ಜಿಪಿಆರ್

# ಸ್ವಯಂ ಉದ್ಯೋಗ ಸೃಜನೆ : ಅರ್ಜಿ ಆಹ್ವಾನ

ಬೆಂಗಳೂರು, ಜೂನ್ 13 (ಕರ್ನಾಟಕ ವಾರ್ತೆ)

**ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಮೂಲಕ 2016-17 ನೇ ಸಾಲಿನಲ್ಲಿ ಮುಖ್ಯ ಮಂತ್ರಿಗಳ ಸ್ವಯಂ ಉದ್ಯೋಗ ಸೃಜನ ಯೋಜನೆಯಡಿಯಲ್ಲಿ ಕೈಗರಿಕೆ ಮತ್ತು ಸೇವಾ ಚಟುವಟಿಕೆಗಳನ್ನು ಪ್ರಾರಂಭಿಸಲು ಬ್ಯಾಂಕಿನ ಆರ್ಥಿಕ ಸಾಲ ಹಾಗೂ ಇಲಾಖೆಯ ಸಹಾಯಧನದ ಮೂಲಕ ರಾಜ್ಯದ 2500 ಅರ್ಹ ಫಲಾನುಭವಿಗಳಿಗೆ ಅವಕಾಶ ಕಲ್ಪಿಸಲಾಗುವುದು.**

**ಈ ಯೋಜನೆಯನ್ನು ಎಲ್ಲಾ ಜಿಲ್ಲೆಯ ಜಂಟಿ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರಗಳು ಹಾಗೂ ಜಿಲ್ಲಾ ಅಧಿಕಾರಿಗಳು, ಖಾದಿ ಗ್ರಾಮೋದ್ಯೋಗ ಮಂಡಳಿಗಳ ಮೂಲಕ ಅನುಷ್ಠಾನಗೊಳಿಸಲಾಗುತ್ತಿದ್ದು ಅರ್ಹತೆಯುಳ್ಳ ಆಸಕ್ತ ಯುವಜನರು ವೆಬ್‌ಸೈಟ್‌ನಲ್ಲಿ ಆನ್‌ಲೈನ್ ಮೂಲಕ ದಿನಾಂಕ: 13-06-2016 ರಿಂದ 16-07-2016 ರವರೆಗೆ ಅರ್ಜಿ ಸಲ್ಲಿಸಬಹುದಾಗಿದೆ.**

**ಹೆಚ್ಚಿನ ಮಾಹಿತಿಗಾಗಿ ಸಂಬಂಧಿಸಿದ ಜಿಲ್ಲಾ ಕೈಗಾರಿಕಾ ಕೇಂದ್ರ ಹಾಗೂ ಜಿಲ್ಲಾ ಖಾದಿ ಗ್ರಾಮೋದ್ಯೋಗ ಮಂಡಳಿ ಕಚೇರಿಗಳನ್ನು ಸಂರ್ಪಕಿಸುವಂತೆ ಪ್ರಕಟಣೆಯಲ್ಲಿ ಕೋರಲಾಗಿದೆ.**

ಬಾಬು::ಕೆಎಂ

# ಪ್ರವೇಶ ಪತ್ರ

ಬೆಂಗಳೂರು, ಜೂನ್ 13 (ಕರ್ನಾಟಕ ವಾರ್ತೆ)

ದಿನಾಂಕ:20.06.2016ರಿಂದ ದಿನಾಂಕ:29.06.201 6ರವರೆಗೆನಡೆಯುವ ಕರ್ನಾಟಕ ಮುಕ್ತ ಶಾಲೆ (ಕೆ.ಓ.ಎಸ್) ಪೂರಕ ಪರೀಕ್ಷೆಯ ಪ್ರವೇಶಪತ್ರಗಳನ್ನು ರಾಜ್ಯದ ಎಲ್ಲಾ ಕರ್ನಾಟಕ ಮುಕ್ತ ಶಾಲೆ (ಕೆ.ಓ.ಎಸ್) ಕಲಿಕಾ ಕೇಂದ್ರಗಳಿಗೆ ಜಿಲ್ಲಾ ಡಯಟ್ ಪ್ರಾಂಶುಪಾಲರ ಮುಖಾಂತರ ಕಳುಹಿಸಲಾಗಿದೆ. ವಿದ್ಯಾರ್ಥಿಗಳು ಸಂಬಂಧಿಸಿದ ಕರ್ನಾಟಕ ಮುಕ್ತ ಶಾಲಾ ಕಲಿಕಾ ಕೇಂದ್ರಗಳಿಂದ ಪ್ರವೇಶ ಪತ್ರಗಳನ್ನು ಪಡೆದುಕೊಳ್ಳುವಂತೆ, ನಿರ್ದೇಶಕರು(ಇತರೆ ಪರೀಕ್ಷೆಗಳು) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು, ಇವರು ತಿಳಿಸಿದ್ದಾರೆ.
ಬಾಬು/ಕೆಎಂ

## Admission Tickets

## Bangalore, June 13 (Karnataka Information)

Admission tickets for Karnataka Open School (K.O.S) Supplementary Examination to be conducted from 20.06.2016 to 29.06.2016 by Karnataka Secondary Education

Examination Board (Other Exams)have been dispatched to all the Karnataka Open School (K.O.S) Study Centers through concern District DIET Principal. Students are informed to collect the same from the concerned Karnataka Open School (K.O.S) Study Centres as per the statement of Director(Other Exams), Karnataka Secondary Education Examination Board, Bangalore.

**babu/km**